ಗ್ರಾಮೀಣಬಿವೃದ್ಧಿ ಇಲಾಖೆಗೆ ಬರುತ್ತದೋ ಎನ್ನುವುದು clear ಆಗಬೇಕು. ಆ ಓ.ಡಿ.ಪಿ.ಸಂಸ್ಥೆ ಯಾರ controlಗೆ ಬರುತ್ತದೆ, ಯಾವ ರೀತಿ ನಡೆಯುತ್ತಿದೆ ಎನ್ನುವುದು ಮುಖ್ಯವಾಗಿ ನಮಗೆ ಬೇಕಾಗಿರುವ ಮಾಹಿತಿ. ಅದರ ಬಗ್ಗೆ ಏನೂ ಅರ್ಥವಾಗುತ್ತಿಲ್ಲ.

ಚಾಮರಾಜನಗರದಲ್ಲಿ ಕುಡಿಯುವ ನೀರಿನ ಸಮಸ್ಯೆಯ ಬಗ್ಗೆ

111 (727) ಶ್ರೀ ಪುಟ್ಟರಂಗಶೆಟ್ಟಿ ಸಿ. (ಚಾಮರಾಜನಗರ):– ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಸಚಿವರು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಚಾಮರಾಜನಗರ ತಾಲ್ಲೂಕಿನ ಹಳ್ಳಿಗಳಿಗೆ, ಶಾಶ್ವತ ಕುಡಿಯುವ ನೀರಿಗಾಗಿ ರೂ. 100.00 ಕೋಟಿ ಅನುದಾನವನ್ನು ಆಯವ್ಯಯದಲ್ಲಿ ಒದಗಿಸಿದ್ದು, ಇಲ್ಲಿಯತನಕ ಬಿಡುಗಡೆ ಮಾಡಲಾಗಿರುವ ಹಣ ಎಷ್ಟು;

ಆ) ಹಾಗಿದ್ದಲ್ಲಿ, ಇಲ್ಲಿಯವರೆಗಿನ ಯೋಜನೆಯ ಪ್ರಗತಿಯ ವಿವರ ಒದಗಿಸುವುದು?

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಸಚಿವರು):–

ಅ) 2010–11ರ ಆಯವ್ಯಯ ಭಾಷಣದನ್ವಯ ಚಾಮರಾಜನಗರ ತಾಲ್ಲೂಕಿನ ಹಳ್ಳಿಗಳಿಗೆ ಶಾಶ್ವತ ಕುಡಿಯುವ ನೀರಿಗಾಗಿ ಆರ್ಥಿಕ ಮತ್ತು ತಾಂತ್ರಿಕ ಕಾರ್ಯಸಿಂಧುತ್ವವಿರುವ ರೂ. 100.00 ಕೋಟಿ ಅಂದಾಜಿನ ಸೂಕ್ತ ಯೋಜನೆ ರೂಪಿಸಬೇಕಾಗಿದೆ ನಂತರ ಅನುದಾನ ಬಿಡುಗಡೆ ಪ್ರಕ್ರಿಯೆ ಅನುಸರಿಸಬೇಕಾಗಿದೆ.

ಆ) ಅನ್ವಯಿಸುವುದಿಲ್ಲ

ಶ್ರೀ ಸಿ. ಪುಟ್ಟರಂಗಶೆಟ್ಟಿ: ಮಾನ್ಯ ಅಧ್ಯಕ್ಷರೇ, ಇಲ್ಲಿ ಕೊಟ್ಟಿರುವ ಉತ್ತರದಲ್ಲಿ 100 ಕೋಟಿ ರೂಪಾಯಿ ಅಂದಾಜಿನ ಸೂಕ್ತ ಯೋಜನೆ ರೂಪಿಸಬೇಕಾಗಿದೆ. ನಂತರ ಅನುದಾನ ಬಿಡುಗಡೆ ಪ್ರಕ್ರಿಯೆ ಅನುಸರಿಸಬೇಕಾಗಿದೆ ಎಂದು ಕೊಟ್ಟಿದ್ದಾರೆ. ಮಾನ್ಯ ಮಂತ್ರಿಗಳು ನಮ್ಮ ನಗರಕ್ಕೆ ಬಂದು ಪರಿಶೀಲನೆ ಮಾಡಿದ್ದಾರೆ. ನಮ್ಮ ನಗರದಲ್ಲಿ ಕುಡಿಯುವ ನೀರಿಗೆ ಬಹಳ ಹಾಹಾಕಾರ ಇದೆ ನೀವು ಉತ್ತರದಲ್ಲಿ ಹೇಳಿ ಅ ಕಾಮಗಾರಿ ಜಾರಿಗೆ ತರದೆ ಹೋದರೆ ಬಹಳ ತೊಂದರೆಯಾಗುತ್ತದೆ. ನಮ್ಮಲ್ಲಿ ಕುಡಿಯುವ ನೀರಿನ ವ್ಯವಸ್ಥೆಗೆ ಎರಡು ರೀತಿಯಲ್ಲಿ ಚಿಂತನೆ ಇದೆ. ಒಂದು ಕೆರೆಯನ್ನು ತುಂಬಿಸಿ ಕುಡಿಯುವ ನೀರನ್ನು ಕೊಡುವಂತಾದ್ದು,

ಇನ್ನೊಂದು ಪೈಪ್‌ಲೈನ್ ಮುಖಾಂತರ ಕೊಡಬೇಕೆಂದು ಇದೆ. ದಯಮಾಡಿ ಯಾವಾಗ ಕಾಮಗಾರಿಯನ್ನು ಪ್ರಾರಂಭ ಮಾಡುತ್ತೀರೆಂದು ಈ ಸಭೆಯಲ್ಲಿ ತಿಳಿಸಿಕೊಡಬೇಕೆಂದು ನಾನು ಕೇಳಿಕೊಳ್ಳುತ್ತೇನೆ.

ಶ್ರೀ ಜಗದೀಶ್ ಶೆಟ್ಟರ್: ಮಾನ್ಯ ಅಧ್ಯಕ್ಷರೇ, ಮೊನ್ನೆ ತಾನೇ ನಮ್ಮ ಹಿರಿಯ ಸದಸ್ಯರಾದಂತಹ ಮಹದೇವ ಪ್ರಸಾದ್‌ರವರು ಇದರ ಬಗ್ಗೆ ಪ್ರಶ್ನೆಯನ್ನು ಕೇಳಿದರು. ನಾನು ಅಂದೂ ಕೂಡ ಇದರ ಬಗ್ಗೆ ಹೇಳಿದ್ದೆನು. ಇವತ್ತು ಮಾನ್ಯ ಪುಟ್ಟರಂಗಶೆಟ್ಟಿಯವರು ಈ ಪ್ರಶ್ನೆಯನ್ನು ಕೇಳಿದ್ದಾರೆ. ನಾನು ಚಾಮರಾಜ ನಗರಕ್ಕೆ ಬಂದಿದ್ದೆ ಹಾಗೂ review ಮೀಟಿಂಗ್ ಮಾಡಿದ್ದೇನೆ. ಅಲ್ಲಿ ಕುಡಿಯುವ ನೀರಿನ ಸಮಸ್ಯೆ ಏನಿದೆ ಅದನ್ನು ನಾನು ಅರ್ಥ ಮಾಡಿಕೊಂಡಿದ್ದೇನೆ. ಮಾನ್ಯ ಮುಖ್ಯ ಮಂತ್ರಿಗಳು ಆ ಜಿಲ್ಲೆಗೆ ಬೇರೆ ಕಾರ್ಯಕ್ರಮಕ್ಕೆ ಹೋದಾಗ ಅವರ ಗಮನಕ್ಕೂ ಕೂಡ ಬಂದಿದೆ. ಹೀಗಾಗಿ ಮಾನ್ಯ ಮುಖ್ಯಮಂತ್ರಿಗಳು ತಮ್ಮ ಬಜೆಟ್ ಭಾಷಣದಲ್ಲಿ ಈ ಚಾಮರಾಜ ನಗರಕ್ಕೆ ಸಂಬಂಧಪಟ್ಟಂತೆ ಕುಡಿಯುವ ನೀರಿನ ಯೋಜನೆ ಸಲುವಾಗಿ ನೂರು ಕೋಟಿ ರೂಪಾಯಿಯನ್ನು ಕೊಡುತ್ತೇವೆಂದು ಹೇಳಿದ್ದಾರೆ. ಈಗಾಗಲೇ ಹಿಂದೆ ಎರಡು ಬಾರಿ ಕೇಂದ್ರ ಸರ್ಕಾರಕ್ಕೆ ಪ್ರಪೋಸಲ್ ಹೋಗಿತ್ತು. ಆದರೆ ಅದನ್ನು ಕೇಂದ್ರ ಸರ್ಕಾರಕ್ಕೆ ಕಳುಹಿಸಿದಂತಹ ಸಂದರ್ಭದಲ್ಲಿ ಆ ಗೈಡ್‌ಲೈನ್ಸ್ ಒಳಗೆ ಬರುವುದಿಲ್ಲವೆಂದು ಹೇಳಿ approval ಆಗಲಿಲ್ಲ. ಇವತ್ತು ಮಾನ್ಯ ಮುಖ್ಯಮಂತ್ರಿಯವರು ಬಜೆಟ್ ಘೋಷಣೆ ಏನು ಮಾಡಿದ್ದಾರೆ. ಅದರ ಅನ್ವಯ ಒಂದು scheme ಅನ್ನು ನಾವು ತಯಾರು ಮಾಡುತ್ತಿದ್ದೇವೆ. ಈ scheme ಅನ್ನು ಆದಷ್ಟು ಬೇಗ ತಯಾರು ಮಾಡಿಕೊಂಡು ಅದನ್ನು ಆರ್ಥಿಕ ಇಲಾಖೆಗೆ ಮಂಡನೆ ಮಾಡಿ, ಆದಷ್ಟು ಬೇಗನೆ ಇದನ್ನು ಜಾರಿಗೆ ತರುವುದಕ್ಕೆ ನಾನು ಎಲ್ಲಾ ರೀತಿಯ ಪ್ರಯತ್ನಗಳನ್ನು ಮಾಡುತ್ತೇನೆಂಬ ಮಾತನ್ನು ಮಾನ್ಯ ಸದಸ್ಯರ ಗಮನಕ್ಕೆ ತರುತ್ತಿದ್ದೇನೆ.

ಚಿಕ್ಕ ಬಳ್ಳಾಪುರದಲ್ಲಿ ಪದವಿ ಪೂರ್ವ ಕಾಲೇಜು ಸ್ಥಾಪನೆಯ ಬಗ್ಗೆ

112 (640) ಶ್ರೀ ಬಚ್ಚೇಗೌಡ ಕೆ.ಪಿ. (ಚಿಕ್ಕಬಳ್ಳಾಪುರ):– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಚಿಕ್ಕಬಳ್ಳಾಪುರ ನಗರದ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಸುಮಾರು 2800 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಸರ್ಕಾರವು ವಿದ್ಯಾರ್ಥಿಗಳಿಗೆ ಮೂಲಭೂತ ಸೌಲಭ್ಯಗಳನ್ನು